# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 544 (472) |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 30 /01/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯಿಂದ ಕಟ್ಟಡ ಕೂಲಿ ಕಾರ್ಮಿಕರಿಗೆ ನೀಡಲಾಗುವ ವಿವಿಧ ಸೌಲಭ್ಯಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೀಡಲಾಗುವ ವಿವಿಧ ಸೌಲಭ್ಯಗಳ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಿದೆ. |
| ಆ) | 2025-26ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನ ವಿವಿಧ ಕಟ್ಟಡ ಕೂಲಿ ಕಾರ್ಮಿಕರಿಗೆ ಎಷ್ಟು ಮೊತ್ತದ ಅನು ದಾನವನ್ನು ವಿವಿಧ ಯೋಜನೆ ಗಳಡಿ ಬಿಡುಗಡೆ ಮಾಡಲಾಗಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 2025-26ನೇ ಸಾಲಿನಲ್ಲಿ ವಿವಿಧ ಸೌಲಭ್ಯಗಳನ್ನು ಡಿಬಿಟಿ ಮುಖಾಂತರ ಈ ಕೆಳಕಂಡಂತೆ ನೀಡಲಾಗಿದೆ. |
| ಇ) | 2025-26ನೇ ಸಾಲಿನಲ್ಲಿ ಸೌಲಭ್ಯ ಪಡೆದ ಸಿಂಧನೂರು ತಾಲ್ಲೂಕಿನ ವಿವಿಧ ಫಲಾನುಭವಿಗಳ ಸಂಖ್ಯೆ ಎಷ್ಟು: (ವಿವರವನ್ನು ಯೋಜನೆವಾರು ನೀಡುವುದು) | (see table below) |

| ಯೋಜನೆ | ಫಲಾನುಭವಿಗಳ ಸಂಖ್ಯೆ | ವಿತರಿಸಿದ ಮೊತ್ತ (ರೂ) |
|---|---|---|
| ಅಪಘಾತ ಸಹಾಯಧನ | 1 | 2,50,000 (2.50 ಲಕ್ಷಗಳಿಗೆ ನಿಶ್ಚಿತ ಠೇವಣಿ) |
| ಪ್ರಮುಖ ವೈದ್ಯಕೀಯ ವೆಚ್ಚ | 2 | 2,64,935 |
| ಅಂತ್ಯ ಸಂಸ್ಕಾರ ವೆಚ್ಚ | 12 | 9,00,000 |
| ಮದುವೆ ಸಹಾಯಧನ | 120 | 72,00,000 |
| ತಾಯಿ ಮಗು ಸಹಾಯಹಸ್ತ | 3 | 18,000 |
| **ಒಟ್ಟು** | **138** | **88,82,935** |

| | | |
|---|---|---|
| ಈ) | ಸಿಂಧನೂರು ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆಯಿಂದ ಕಾರ್ಮಿಕರ ಕ್ಷೇಮಾಭಿವೃದ್ಧಿಗೆ ಅನುಕೂಲವಾಗುವಂತೆ ವಿವಿಧ ಸೌಲಭ್ಯಗಳನ್ನು ಒದಗಿಸಲು 'ಕಾರ್ಮಿಕ ಭವನ' ವನ್ನು ನಿರ್ಮಾಣ ಮಾಡುವ ಕುರಿತು ಸರ್ಕಾರದ ನಿಲುವೇನು? | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾಯ್ದೆ ಹಾಗೂ ನಿಯಮಗಳನ್ವಯ ಕಾರ್ಮಿಕ ಭವನ ನಿರ್ಮಾಣ ಮಾಡಲು ಅವಕಾಶವಿರುವುದಿಲ್ಲ ಹಾಗೂ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ 2024-25ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿಗೆ ಸಂಬಂಧಿಸಿದಂತೆ 08 ಕಾರ್ಖಾನೆ/ಸಂಸ್ಥೆಗಳ 960 ಕಾರ್ಮಿಕರಿಂದ ಒಟ್ಟು ರೂ. 57,600/-ಗಳ ಮೊತ್ತವನ್ನು ವಂತಿಗೆಯಾಗಿ ಪಾವತಿಸಲಾಗಿದೆ. ಸಿಂಧನೂರು ತಾಲ್ಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸಂಘಟಿತ ವಲಯದ ಕಾರ್ಮಿಕರು ಇಲ್ಲದಿರುವುದರಿಂದ ಹಾಗೂ ಮಂಡಳಿಯು ನಿವೇಶನವನ್ನು ಹೊಂದಿರುವುದಿಲ್ಲ ವಾದ್ದರಿಂದ ಕರ್ನಾಟಕ ಕಲ್ಯಾಣ ಮಂಡಳಿ ವತಿಯಿಂದ ಕಾರ್ಮಿಕ ಸಮುದಾಯ ಭವನ ನಿರ್ಮಾಣ ಮಾಡಿರುವುದಿಲ್ಲ. |

**ಕಾಇ 51 ಎಲ್‌ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು)ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 544 (472)

**ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| **1** | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| **2** | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| **3** | 9 ಮತ್ತು 10ನೇ ತರಗತಿ | **3,000/-** | - |
| **4** | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| **5** | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| **6** | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| **7** | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | **15,000/-** | **20,000/-** |
| **8** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು | **20,000/-** | **25,000/-** |

| | | | |
|---|---|---|---|
| | ಕಾನೂನು ಪದವಿ ಸಹಿತ (Professional Courses) | | |
| **9** | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **10** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | **40,000/-** | **-** |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

9. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**

10. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**

11. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**

12. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**

13. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.

**14. _ಸುರಕ್ಷತಾ ಕಿಟ್:** ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ

**15. ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ

**16. ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ.